ಶ್ರೀ ಎ. ಕೃಷ್ಣಪ್ಪ : ಸುಪ್ರೀಂ ಕೋರ್ಟ್ ಆರ್ಡರ್ ಆಗಿದೆ.

ಶ್ರೀ ಬಿ.ಎಸ್. ಯಡಿಯೂರಪ್ಪ : ಅದನ್ನು ನಾನು ಪರಿಶೀಲನೆ ಮಾಡಿ ನೋಡುತ್ತೇನೆ. ನಾನು ನಿಮಗೆ ಒಂದು ಮಾತನ್ನು ಹೇಳುತ್ತೇನೆ. ಡಾ: ನಂಜುಂಡಪ್ಪ ವರದಿ ಬಗ್ಗೆ ಚರ್ಚೆ ಮಾಡಿದ ಮೇಲೆ ನಾನು ಉತ್ತರ ಕೊಟ್ಟಮೇಲೆ ಇಲ್ಲಿ ಅಧಿವೇಶನ ಮಾಡಿದ್ದಕ್ಕೆ ಸಾರ್ಥಕವಾಯಿತು, ಸಾಕಷ್ಟು ಕಾರ್ಯಕ್ರಮಗಳ ಬಗ್ಗೆ ಈ ಸಮ್ಮಿಶ್ರ ಸರ್ಕಾರ ಒತ್ತನ್ನು ಕೊಟ್ಟಿದೆಯಪ್ಪಾ, ಇಲ್ಲಿ ಅಧಿವೇಶನ ಮಾಡಿದ್ದಕ್ಕೂ ಸಾರ್ಥಕವಾಯಿತು ಎಂದು ಹೇಳುವ ರೀತಿಯಲ್ಲಿ ನಾನೂ ಮತ್ತು ಮುಖ್ಯಮಂತ್ರಿಗಳು ಚರ್ಚೆ ಮಾಡಿ ಕ್ಯಾಬಿನೆಟ್‌ನಲ್ಲಿ ಇದರ ಬಗ್ಗೆ ಚರ್ಚೆ ಮಾಡಿ ಎಷ್ಟು ಸಾಧ್ಯವೋ ಅಷ್ಟು ಮ್ಯಾಕ್ಸಿಮಮ್ ಇಲ್ಲಿನ ಕಾರ್ಯಕ್ರಮಗಳಿಗೆ ಅನುಕೂಲ ಮಾಡಿಕೊಡತಕ್ಕಂಥ ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತೇನೆ ಎನ್ನತಕ್ಕಂಥ ಭರವಸೆಯನ್ನು ಈ ಸಂದರ್ಭದಲ್ಲಿ ಕೊಟ್ಟು...

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ : ಮಾನ್ಯ ಉಪ ಮುಖ್ಯಮಂತ್ರಿಗಳೆ, ನಾನು ಕೇಳಿದುದರ ಬಗ್ಗೆ ತಾವು ಏನನ್ನೂ ಹೇಳಲಿಲ್ಲ.

ಶ್ರೀ ಬಿ.ಎಸ್. ಯಡಿಯೂರಪ್ಪ : ಒಂದೊಂದಕ್ಕೂ ಉತ್ತರ ಕೊಡುವುದಕ್ಕೆ ಆಗುವುದಿಲ್ಲ ಸಾರ್. ನೀವು ಹೇಳಿರುವುದರ ಬಗ್ಗೆ ನಾನು ಪರಿಶೀಲನೆಯನ್ನು ಮಾಡುತ್ತೇನೆ.

ಉಪಾಧ್ಯಕ್ಷರು : ಈಗ 2006–07ರ ಪೂರಕ ಅಂದಾಜುಗಳ (ಮೊದಲನೆಯ ಕಂತು) ಬೇಡಿಕೆಗಳನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ ದಿನಾಂಕ 31.3.2007 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1ರಿಂದ 5 ,7 ರಿಂದ 15, 17 ರಿಂದ 24 ಹಾಗೂ 26 ರಿಂದ 28ಕ್ಕೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರಾದ ಮತ್ತು ಅದನ್ನು ಭರಿಸಲು ಪೂರಕ ಅಂದಾಜುಗಳಲ್ಲಿ ಸೇರಿಸಲಾದ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರಿದ ಮೊತ್ತವನ್ನು ಈ ಸಭೆಯು ಮಂಜೂರು ಮಾಡುತ್ತದೆ."

ಪ್ರಸ್ತಾವವು ಅಂಗೀಕೃತವಾಯಿತು.

ಸದನವು ಅಂಗೀಕರಿಸಿದ 2006–07ರ ಪೂರಕ ಅಂದಾಜು (ಮೊದಲನೆ ಕಂತು) ಬೇಡಿಕೆಗಳನ್ನು ಅನುಬಂಧದಲ್ಲಿ ನೀಡಲಾಗಿದೆ. (ಅನುಬಂಧ–1)

ಉಪಾಧ್ಯಕ್ಷರು : ಈಗ ವಿಧೇಯಕಗಳನ್ನು ಮಂಡಿಸುವುದು. ಮಾನ್ಯ ಯಡಿಯೂರಪ್ಪನವರೆ, ಮಂಡಿಸಿ.

7. ಶಾಸನಗಳ ರಚನೆ

ವಿಧೇಯಕಗಳ ಮಂಡನೆ

(ಅ) ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕ, 2006 ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೆ, 2006ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 4) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

11.00 P.M.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ,

"2006 ನೇ ಸಾಲಿನಲ್ಲಿ ಕರ್ನಾಟಕ ಧನ ವಿನಿಯೋಗ ಸಂಖ್ಯೆ 4ರ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನಿಡಲಾಯಿತು)

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೆ, 2006ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 4) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ".

ಉಪಾಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಆ) ಕರ್ನಾಟಕ ಪೌರ ಸಸ್ಥಾನ್ಯ ನಿಗಮಗಳ (ತಿದ್ದುಪಡಿ) ವಿಧೇಯಕ, 2006.

ಶ್ರೀ ಎಂ.ಪಿ. ಪ್ರಕಾಶ್ (ಸಸ್ಥಾನ್ಯ ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಉಪಾಧ್ಯಕ್ಷರೆ, 0"2006ನೇ ಸಾಲಿನ ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಉಪಾಧ್ಯಕ್ಷರು : ಪ್ರಸ್ತಾವನೆ ಏನೆಂದರೆ "2006ನೇ ಸಾಲಿನ ಕರ್ನಾಟಕ ಪೌರ, ನಿಗಮಗಳ (ತಿದ್ದುಪಡಿ) ವಿದೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ಪಿ. ಪ್ರಕಾಶ್ : ಇದು ಬಹಳ ಸಿಂಪಲ್ ಇದೆ. 100 ಎಂದಿರುವುದನ್ನು 150 ಎಂದು ಆಗಬೇಕಾಗಿರುವುದು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ : ಮಾನ್ಯ ಉಪಾಧ್ಯಕ್ಷರೆ, ಇದು ಚರ್ಚೆಯಾಗಬೇಕು, 100 ಇರುವುದನ್ನು 150 ಮಾಡಿ...

ಉಪಾಧ್ಯಕ್ಷರು : ಇದು ಈಗ ಮಂಡನೆಯಾಗುತ್ತಿರುವುದು, ಚರ್ಚೆಗೆ ಅವಕಾಶ ಇದೆ. ಇದು ಮಂಡನೆ, ಚರ್ಚೆಯಾಗಿಲ್ಲ. ನಾಳೆ ಚರ್ಚೆಗೆ ತೆಗೆದುಕೊಳ್ಳುವುದು.

ಶ್ರೀ ಎಂ.ಪಿ. ಪ್ರಕಾಶ್ (ಗೃಹ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಉಪಾಧ್ಯಕ್ಷರೆ, "2006ನೇ ಸಾಲಿನ ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಶ್ರೀ ಎಂ.ಪಿ. ಪ್ರಕಾಶ್ : ಇವತ್ತು ಮಂಡಿಸಿ ಬಿಡುತ್ತೇವೆ ಅಷ್ಟೆ. ಪರ್ಯಾಲೋಚನೆಗೆ ಇವತ್ತು ಇಲ್ಲ. ಕೇವಲ ಇವತ್ತು ಮಂಡಿಸುತ್ತಿರುವುದು. ಪರ್ಯಾಲೋಚನೆಯನ್ನು ನಾಳೆ ತೆಗೆದುಕೊಳ್ಳಲಿ. ಈಗ ಮಂಡಿಸಿದ್ದೇನೆ ಅಷ್ಟೆ.